ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **1549 (1882)**
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 22.03.2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಮೈಸೂರು ಮತ್ತು ಬೆಂಗಳೂರು ವಿಭಾಗದ ಪ್ರೌಢಶಾಲಾ ಸಹ ಶಿಕ್ಷಕರು ಮತ್ತು ತತ್ಸಮಾನ ವೃಂದದಿಂದ ಮುಖ್ಯ ಶಿಕ್ಷಕರು ಮತ್ತು ತತ್ಸಮಾನ ವೃಂದಕ್ಕೆ ಮುಂಬಡ್ತಿ ನೀಡುವಾಗ ಹಾಲಿ ಇರುವ ನಿಯಮ ಶೇಕಡ 25% ನೇರನೇಮಕಾತಿ ಹಾಗೂ ಶೇಕಡ 75% ಮುಂಬಡ್ತಿ ಕೋಟಾ ಸರಿಯಾಗಿ ಪಾಲನೆ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ ಇಡಿ 51 ಡಿಜಿಓ 2005 ದಿನಾಂಕ:30/06/2006ರಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮ್ಮಾನ ವೃಂದದ ಲಭ್ಯ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಶೇಕಡ.25% ರಷ್ಟು ಮತ್ತು ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ಸೇವಾ ಜೇಷ್ಠತಾ ಆಧಾರದಲ್ಲಿ ಮುಂಬಡ್ತಿಯನ್ನು ನೀಡುವ ಮೂಲಕ ಶೇಕಡ:75% ರಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ. ಮುಂದುವರೆದು ಮೇಲಿನಂತೆ ಕ್ರಮವನ್ನು ಅನುಸರಿಸಿ ಪ್ರಸ್ತುತ 2020-21ನೇ ಸಾಲಿನಲ್ಲಿ ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರು/ ತತ್ಸಮಾನ ವೃಂದದ ಲಭ್ಯವಿದ್ದ ಖಾಲಿ ಹುದ್ದೆಗಳಿಗೆ (ಮುಂಬಡ್ತಿ) ಶೇಕಡ 75ರ ಅನುಪಾತದಲ್ಲಿ ಭರ್ತಿ ಮಾಡಲು ಕ್ರಮವಹಿಸಲಾಗಿದೆ.
ಆ)	ಹಾಗಾದರೆ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರಗಳನ್ನು ನೀಡುವುದು)	ಸರ್ಕಾರದ ಆದೇಶ ಸಂಖ್ಯೆ: ಇಡಿ ಡಿಜಿಓ 2005 ದಿನಾಂಕ:30/06/2006ರಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಶೇಕಡ.25%ರಷ್ಟು ಮತ್ತು ಮುಂಬಡ್ತಿಯ ಮೂಲಕ ಶೇಕಡ:75% ರಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಮೇಲಿನಂತೆ ಕ್ರಮವಹಿಸಲಾಗುತ್ತಿರುವುದರಿಂದ ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾಗಿರುವುದಿಲ್ಲ.
ಇ)	ಯಾವ ಕಾಲಮಿತಿಯಲ್ಲಿ ತಾರತಮ್ಯವನ್ನು ಸರಿಪಡಿಸಿ, ಮುಂಬಡ್ತಿ ಕೋಟಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಲಾಗುವುದು ?	

ಸಂಖ್ಯೆ: ಇಪಿ 48 ಎಸ್‌ಓಹೆಚ್ 2021

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ
ಸಚಿವರು